# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 18-06-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶಾಹೀನಾ, ವೈದ್ಯಾಧಿಕಾರಿಗಳ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
7. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಶ್ರೀ ವಿನಯ್, ಸಹಾಯಕ ಅಭಿಯಂತರರು, ಬೀದಿ ದೀಪಗಳ ವಿಭಾಗ
6. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
7. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ಬಿಡಿಎ ಬಡಾವಣೆಯಲ್ಲಿ ಪಾರ್ಕ್ ಹತ್ತಿರ ಬೀದಿ ದೀಪದ ಕಂಬಕ್ಕೆ ಎರಡು ಹೊಸ ಫಿಟ್ಟಿಂಗ್‌ಗಳು ಅವಶ್ಯಕತೆ ಇದ್ದು, ಅವುಗಳನ್ನು ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದು ಕೂಡಲೇ ಅಳವಡಿಸಲು ಹಿಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಲಾಗಿದ್ದು, ಈವರೆವಿಗೂ ಈ ಬಗ್ಗೆ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಬೀದಿ ದೀಪಗಳ ಅಭಿಯಂತರರೊಂದಿಗೆ ಮಾತನಾಡಿ ಸಮಸ್ಯೆಯನ್ನು ಬಗೆಹರಿಸುವುದಾಗಿ ಸಭೆಗೆ ತಿಳಿಸಿದರು.

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯ ಖಾಲಿ ಜಾಗದಲ್ಲಿ ಧೂಮಪಾನ ಮತ್ತು ಮದ್ಯಪಾನ ಮಾಡುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಪ್ರಸ್ತಾಪಿಸಿದಾಗ ಸಭೆಯಲ್ಲಿ ಹಾಜರಿದ್ದ ಕಾನೂನು



Scanned with CamScanner

ಸುವ್ಯವಸ್ಥೆ ಪೊಲೀಸ್ ಅಧಿಕಾರಿಗಳು ಮಾತನಾಡಿ, ಸದರಿ ಪ್ರದೇಶಕ್ಕೆ ಹೆಚ್ಚಿನ ನಿಗಾ ವಹಿಸಲಾಗುವುದೆಂದು ತಿಳಿಸಿ, ಸದರಿ ಪ್ರದೇಶದಲ್ಲಿ ಸಂಜೆ ಹಾಗೂ ರಾತ್ರಿ ಸಮಯದಲ್ಲಿ ಹೊಯ್ಸಳ ವಾಹನದ ಗಸ್ತನ್ನು ಹೆಚ್ಚಿಸಲು ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

3) **ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ) ರವರು ಮಾತನಾಡಿ,** ವಾರ್ಡ್ ವ್ಯಾಪ್ತಿಯ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿ ತೆರವುಕಾರ್ಯಾಚರಣೆಯನ್ನು ಭಾಗಶಃ ಮಾಡಲಾಗಿದ್ದು, ಇನ್ನೂ ಬಾಕಿ ಇರುವ ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಈವರೆವಿಗೂ ಯಾವುದೇ ಪಾದಾಚಾರಿ ಮಾರ್ಗದ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಕೈಗೊಳ್ಳದೇ ಇರುವುದರಿಂದ ಬೇಸರ ವ್ಯಕ್ತಪಡಿಸಿ, ಈ ಬಗ್ಗೆ ಪಾಲಿಕೆಯ ವಿವಿಧ ಇಲಾಖೆಗಳ ಅಧಿಕಾರಿ ನೌಕರರೊಂದಿಗೆ ಚರ್ಚಿಸಿ, ಪಾದಾಚಾರಿ ಮಾರ್ಗದ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಕೈಗೊಳ್ಳಲು ಸಭೆಗೆ ಮತ್ತೊಮ್ಮೆ ತಿಳಿಸಿದರು.

4) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯ ಮುಖ್ಯರಸ್ತೆಯಲ್ಲಿ ಹಾಗೂ ಹಲವು ರಸ್ತೆಗಳನ್ನು ಸ್ವಚ್ಛಗೊಳಿಸಲು ಕಡಿಮೆ ಪೌರಕಾರ್ಮಿಕರನ್ನು ನಿಯೋಜಿಸುತ್ತಿದ್ದು, ಇದರಿಂದ ವಾರ್ಡಿನ ಸಂಪೂರ್ಣ ರಸ್ತೆಗಳನ್ನು ಸ್ವಚ್ಛಗೊಳಿಸಲು ಕಷ್ಟಸಾಧ್ಯವಾಗಿದ್ದು, ಸದರಿ ಪ್ರದೇಶದಲ್ಲಿ ಹೆಚ್ಚಿನ ಜನರನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ನಿಯೋಜಿಸಿದಲ್ಲಿ, ಪೌರಕಾರ್ಮಿಕರು ಸಮರ್ಪಕವಾಗಿ ಸ್ವಚ್ಚತಾ ಕಾರ್ಯ ನಿರ್ವಹಿಸಲು ಅನುಕೂಲವಾಗುವುದೆಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ಮಾತನಾಡಿ, ಈ ಬಗ್ಗೆ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ, ಸದರಿ ಪ್ರದೇಶಕ್ಕೆ ಇನ್ನೂ ಹೆಚ್ಚಿನ ಪೌರ ಕಾರ್ಮಿಕರನ್ನು ನಿಯೋಜಿಸಿ, ರಾಮಯ್ಯ ಬಡಾವಣೆಯ ಎಲ್ಲಾ ರಸ್ತೆಗಳನ್ನು ಸ್ವಚ್ಛಗೊಳಿಸಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

5) **ಶಾಹೀನಾ, ವೈದ್ಯಾಧಿಕಾರಿಗಳ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ, ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಯಾವುದೇ ಪಾಸಿಟಿವ್ ಪ್ರಕರಣ ದೃಢಪಟ್ಟಿರುವುದಿಲ್ಲ, ಹಾಗೂ ಪ್ರಸ್ತುತ ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಫ್ರಂಟ್ ಲೈನ್ ಕಾರ್ಯಕರ್ತರಿಗೆ ಹಾಗೂ ಈಗಾಗಲೇ ಎರಡು ಡೋಸ್‌ಗಳನ್ನು ಪಡೆದಿರುವ ಎಲ್ಲಾ ನಾಗರೀಕರಿಗೆ ಬೂಸ್ಟರ್ ಡೋಸ್ ನೀಡಲಾಗುತ್ತಿದ್ದು, ಅವಶ್ಯವಿರುವ ಎಲ್ಲಾ ನಾಗರೀಕರು ಲಸಿಕೆಯನ್ನು ಪಡೆದುಕೊಳ್ಳಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar .A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.



Scanned with CamScanner